**<u>3 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ರಾಮನಗರ.</u>**

**<u>ಎಸ್.ಸಿ. ಸಂಖ್ಯೆಃ 79/2013</u>**

ದಿನಾಂಕಃ 01.12.2021
(ಸಾಕ್ಷಿಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು)

ಚಾಸಾ - 9 ಪ್ರಾಸಾ - 6

| | | |
|---|---|---|
| ಹೆಸರು | ಃ | ನಾಗರಾಜು |
| ತಂದೆಯ/ಗಂಡನ ಹೆಸರು | ಃ | ಚಿಕ್ಕಮಲ್ಲಯ್ಯ |
| ವಯಸ್ಸು | ಃ | 48 ವರ್ಷ |
| ಉದ್ಯೋಗ | ಃ | ವ್ಯವಸಾಯ |
| ವಾಸಸ್ಥಳ | ಃ | ಮಾಯಸಂದ್ರ |

**<u>ಮುಖ್ಯವಿಚಾರಣೆಃ ಮಾನ್ಯ ಸರ್ಕಾರಿ ಅಭಿಯೋಜಕರಿಂದಃ</u>**

ಈಗ ನನಗೆ ತೋರಿಸಿದ ದಾಖಲೆಯಲ್ಲಿರುವ ರುಜು ನನ್ನ ರುಜು. ಸದರಿ ರುಜುವನ್ನು ನಾನು ರಾಜರಾಜೇಶ್ವರಿ ಆಸ್ಪತ್ರೆಯಲ್ಲಿ ಪೊಲೀಸರ ಕೋರಿಕೆಯ ಮೇರೆಗೆ ಮಾಡಿದ್ದೇನೆ. ನಾನು ಯಾವುದೇ ಶವವನ್ನು ಗಮನಿಸಿಲ್ಲ. ನಾನು, ರಾಜರಾಜೇಶ್ವರಿ ಆಸ್ಪತ್ರೆಯಲ್ಲಿ ನನ್ನ ಸಂಬಂಧಿಕರೊಬ್ಬರು ದಾಖಲಾಗಿದ್ದ ಹಿನ್ನೆಲೆಯಲ್ಲಿ ಸದರಿ ಆಸ್ಪತ್ರೆಗೆ ಹೋಗಿದ್ದೆನು.

2. ನನ್ನ ರುಜು ಇರುವ ದಾಖಲೆಯನ್ನು ನಿಶಾನೆ ಪಿ 3 ಎಂದು, ಅದರಲ್ಲಿರುವ ನನ್ನ ರುಜುವನ್ನು ನಿಶಾನೆ ಪಿ 3(ಎ) ಎಂದು ಗುರುತು ಮಾಡಲಾಯಿತು. ನಿಶಾನೆ ಪಿ 3 ರಲ್ಲಿ ಬರೆದಿರುವ ಒಕ್ಕಣೆಯ ಬಗ್ಗೆ ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀಸವಾಲು ಮಾಡಲು ಅಭಿಯೋಜಕರು ಕೋರಿದ್ದಾರೆ, ಪರಿಶೀಲಿಸಿದೆ. ಈ ಸಾಕ್ಷಿಯ ಸಾಕ್ಷ್ಯವು ತನಿಖಾಧಿಕಾರಿ ಸಂಗ್ರಹಿಸಿದ ಸಾಕ್ಷ್ಯಕ್ಕೆ ಭಾಗಶಃ ವಿರುದ್ಧವಾಗಿ ಕಂಡುಬಂದಿದೆ. ಈ ಕಾರಣಕ್ಕಾಗಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸುವುದು ನ್ಯಾಯಸಮ್ಮತವಾಗಿದೆ. ಈ ಕಾರಣಕ್ಕಾಗಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅಭಿಯೋಜಕರಿಗೆ ಅನುಮತಿ ನೀಡಲಾಗಿದೆ)

**<u>ಪಾಟೀ ಸವಾಲುಃ ಮಾನ್ಯ ಅಭಿಯೋಜಕರಿಂದಃ</u>**

3. ದಿನಾಂಕ 14.08.2012 ರಂದು ರಾಜರಾಜೇಶ್ವರಿ ಆಸ್ಪತ್ರೆಯ ಶವಾಗಾರದಲ್ಲಿ ತಾವರೆಕೆರೆ ಪೊಲೀಸ್ ಠಾಣೆಯ ಯುಡಿಆರ್ ನಂ.46/2012 ರಲ್ಲಿ ಭೂತಬಂಗಲ ಕರೆಯಲ್ಲಿ ಮುಳುಗಿ ಮೃತ ಹೊಂದಿದ್ದ ಅಪರಿಚಿತ ಗಂಡಸಿನ ಮೃತ ದೇಹದ ಶವತನಿಖಾ ವರದಿ ಪ್ರಕ್ರಿಯೆ ಸಂದರ್ಭದಲ್ಲಿ ಸದರಿ ಶವವನ್ನು ನಾನು ನೋಡಿದ್ದು, ಈ ಬಗ್ಗೆ ನಿಶಾನೆ ಪಿ 3 ರಲ್ಲಿ ನಮೂದು ಮಾಡಿರುವಂತೆ ವಿವರವಾದ ವರದಿಯನ್ನು ನನ್ನ ಸಮಕ್ಷಮ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ನಿಶಾನೆ ಪಿ 3 ರಲ್ಲಿ ಬರೆದಿರುವ ಸಂಗತಿಗಳು ಗೊತ್ತಿದ್ದರೂ ಸಹ ಆರೋಪಿಗಳಿಗೆ ಸಹಾಯ ಮಾಡಲು ಈಗ ಸುಳ್ಳು ಸಾಕ್ಷ್ಯವನ್ನು ನುಡಿದಿದ್ದೇನೆ ಎನ್ನುವುದು ಸರಿಯಲ್ಲ.

**<u>ಪಾಟೀ ಸವಾಲುಃ</u> ಶ್ರೀಮತಿ.ಜಿ.ಜಿ. ವಕೀಲರಿಂದ – ಆರೋಪಿಗಳ ಪರವಾಗಿಃ-**

4. ನಾನು ಆಸ್ಪತ್ರೆಗೆ ಹೋಗಿದ್ದ ದಿನಾಂಕದ ಬಗ್ಗೆ ನನಗೆ ನೆನಪಿಲ್ಲ ಎಂದರೆ ಸರಿ.

ಮರುವಿಚಾರಣೆಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)

ಓ.ಹೇ.ಕೇ. ಸರಿ ಇದೆ ಎಂದು ಸಾಕ್ಷಿ ಒಪ್ಪಿದ್ದಾರೆ

(ಸಿದ್ದಲಿಂಗ ಪ್ರಭು)
3 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ರಾಮನಗರ.